ಓಎಸ್ ಸಂಖ್ಯೆ. 56/2021 ಪಿಡಬ್ಲ್ಯೂಃ4

ದಿನಾಂಕಃ 23.08.2025ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀಸವಾಲುಃ ಶ್ರೀ ಎಸ್ ಎಸ್. ವಕೀಲರಿಂದಃ

ನಾನು ದಾವಾ ಸ್ವತ್ತಿನ ಕುರಿತು ಯಾವುದೇ ದಾಖಲೆಗಳನ್ನು ನೋಡಿರುವುದಿಲ್ಲ. ಈಗ ದಾವಾ ಸ್ವತ್ತಿನ ಪಹಣಿ ಪತ್ರಿಕೆ ವಾದಿಯ ಹೆಸರಿನಲ್ಲಿ ಇರುತ್ತದೆ. ದಾವಾ ಸ್ವತ್ತಿನ ಸಂಬಂಧಿಸಿದ ಕ್ರಯಪತ್ರವನ್ನು ನಾನು ನೋಡಿರುವುದಿಲ್ಲ. ದಾವಾ ಸ್ವತ್ತಿನ ಪಹಣಿ ಪತ್ರಿಕೆ ವಾದಿಯ ಹೆಸರಿನಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ. ನನಗೆ ದಾವೆಯ ಕುರಿತು ಯಾವುದೇ ಮಾಹಿತಿ ಇಲ್ಲದಿದ್ದರೂ ವಾದಿ ಹೇಳಿದಂತೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಅಕ್ಕ ಪಕ್ಕದಲ್ಲಿ ನಾನು ಜಮೀನು ಹೊಂದಿರುವುದಿಲ್ಲ. ವಾದಿ ನನ್ನ ಸಂಬಂಧಿಕರು. ನಾನು ಉದ್ದೇಶಪೂರ್ವಕವಾಗಿ ವಾದಿಗೆ ಸಹಾಯ ಮಾಡಲು ದಾವಾ ಸ್ವತ್ತಿನಲ್ಲಿ ಸ್ವಾಧೀನತೆ ಹೊಂದಿದ್ದಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಸ್ವಾಧೀನತೆ ವಾದಿ ಹೊಂದಿರುವುದಿಲ್ಲ ಎಂದರೆ ಸರಿಯಲ್ಲ. ವಾದಿ ದಾವಾ ಸ್ವತ್ತಿನ ಮಾಲೀಕತ್ವ ಹೊಂದಿರುವುದಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇರುವುದಿಲ್ಲ.

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇ ಒ.,

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಚಾಮರಾಜನಗರ.